ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ರವರ ನ್ಯಾಯಾಲಯ, ಮಳವಳ್ಳಿ.

ಸಿಸಿ ನಂಃ **53/2024**

| | | |
|---|---|---|
| ಹೆಸರು | ಹೆಚ್. ಸಿದ್ದೇಗೌಡ | ಸಿ.ಡಬ್ಲ್ಯೂ - **5** |
| ತಂದೆಯ ಹೆಸರು | ಹುಚ್ಚೇಗೌಡ | ಪಿ.ಡಬ್ಲ್ಯೂ - **3** |
| ವಯಸ್ಸು | 56 ವರ್ಷ | |
| ಉದ್ಯೋಗ | ವ್ಯವಸಾಯ | |
| ವಾಸ ಸ್ಥಳ | ಹಲಗೂರು | |

ಸಾಕ್ಷಿಗೆ ದಿನಾಂಕಃ 03.08.2026 ರಂದು ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ಎ ಪಿ ಪಿ ರರಿಂದ ಃ

ಚಾಸಾ 2 ರಿಂದ 4 ರವರ ಪರಿಚಯವಿರುವುದಿಲ್ಲ. ಆರೋಪಿಯ ಪರಿಚಯವಿರುವುದಿಲ್ಲ. ಈಗ ನೋಡುತ್ತಿರುವ ದಾಖಲೆಗಳಿಗೆ ಪೊಲೀಸರ ಕೋರಿಕೆ ಮೇರೆಗೆ ಹಲಗೂರು ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ಸದರಿ ದಾಖಲೆಗಳು ಸ್ಥಳ ಮಹಜರ್ ಮತ್ತು ಅಮಾನತ್ತು ಮಹಜರ್ ಆಗಿದ್ದು, ಅವುಗಳನ್ನು ನಿಪಿ 5 ಮತ್ತು 6 ಎಂದು, ಸಾಕ್ಷಿಯ ಸಹಿಗಳನ್ನು ನಿಪಿ 5 ಎ ಮತ್ತು 6 ಎ ಎಂದು ಗುರುತಿಸಲಾಯಿತು. ಸದರಿ ದಾಖಲೆಗಳಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿರುವುದಿಲ್ಲ. ಈಗ ನೋಡುತ್ತಿರುವ ಫೋಟೋಗಳಲ್ಲಿ ನನ್ನ ಭಾವಚಿತ್ರ ಇರುತ್ತದೆ. ಸದರಿ 4 ಫೋಟೋಗಳನ್ನು ನಿಪಿ 7 ರಿಂದ 10 ಎಂದು ಗುರುತಿಸಲಾಯಿತು. ಸದರಿ ಫೋಟೋಗಳನ್ನು ಯಾವ ಉದ್ದೇಶಕ್ಕೆ ತೆಗೆಸಿರುತ್ತಾರೆ ಎಂದು ನನಗೆ ಗೊತ್ತಿರುವುದಿಲ್ಲ. ನನ್ನ ಸಮಕ್ಷಮ ಪೊಲೀಸರು ಯಾವುದೇ ವಾಹವನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ. ನಾನು ಪೊಲೀಸರ ಮುಂದೆ ಹೇಳಿಕೆ ನೀಡಿರುವುದಿಲ್ಲ.

ಎಪಿಪಿ ಯವರ ವಿನಂತಿ ಮೇರೆಗೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿಸಲಾಯಿತು.

ಪಾಟೀ ಸವಾಲುಃ ಎ ಪಿ ಪಿ ರವರಿಂದ ಃ

ದಿ: 19.08.2023 ರಂದು ಅಪಘಾತ ಸಂಬಂಧವಾಗಿ ಪೊಲೀಸರು ಚಾಸಾ 2 ರವರು ತೋರಿಸಿದ ಸ್ಥಳದಲ್ಲಿ ಚಾಸಾ 4 ಮತ್ತು ನನ್ನ ಸಮಕ್ಷಮ ನಿಪಿ 5 ರಂತೆ ಟಿ.ಕೆ. ಹಳ್ಳಿಯ ಬಿ.ಡಬ್ಲ್ಯೂ.ಎಸ್ .ಎಸ್. ಬಿ ಮುಂದಿನ ರಸ್ತೆಯಲ್ಲಿ ಬೆಳಿಗ್ಗೆ 10 ರಿಂದ 11 ರ ಸಮಯದಲ್ಲಿ ಸ್ಥಳ ಮಹಜರ್ ಮಾಡಿ ನಿಪಿ 7 ಮತ್ತು 8 ರಂತೆ ಫೋಟೋಗಳನ್ನು ತೆಗೆಸಿರುತ್ತಾರೆ ಎಂದರೆ ಸರಿಯಲ್ಲ. ಅದೇ ದಿನ ಪೊಲೀಸರು ಠಾಣಾ ಆವರಣದಲ್ಲಿ ನನ್ನ ಮತ್ತು ಚಾಸಾ 4 ರವರ ಸಮಕ್ಷಮ ಬೆಳಿಗ್ಗೆ 11-30 ರಿಂದ 12-30 ರ ಸಮಯದಲ್ಲಿ ನಿಪಿ 6 ರಂತೆ ಅಮಾನತ್ತು ಮಹಜರ್ ಜರುಗಿಸಿ ಕೆಎ-11-ಇಹೆಚ್ 4947 ನಂಬರ್‌ನ ಬೈಕ್‌ನ್ನು ಅಮಾನತ್ತು

ಪಡಿಸಿಕೊಂಡ ನಿಪಿ 9 ಮತ್ತು 10 ರಂತೆ ಫೋಟೋಗಳನ್ನು ತೆಗೆಸಿರುತ್ತಾರೆ ಎಂದರೆ ಸರಿಯಲ್ಲ. ಈಗ ಓದಿ ಹೇಳಲಾದಂತೆ ನಾನು ಪೊಲೀಸರ ಮುಂದೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ಅಲ್ಲಗಳೆದ ಕಾರಣ ಅದನ್ನು ನಿಪಿ 11 ಎಂದು ಗುರುತಿಸಲಾಯಿತು. ಎಲ್ಲಾ ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲು ಃಆರೋಪಿ ಪರ: ವಕೀಲರಿಂದ</u>

ಪಾಟೀ ಸವಾಲು ಇರುವುದಿಲ್ಲ.

ಮರು ವಿಚಾರಣೆ ಇಲ್ಲ.

ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು.

ಓ ಹೇ ಕೇ ಸ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಮಳವಳ್ಳಿ.